**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ನೈಸರ್ಗಿಕ ವಿಕೋಪಗಳಿಂದ ಸ್ಥಳೀಯವಾಗಿ ಉಂಟಾಗುವ ಬೆಳೆ ಹಾನಿ ಪ್ರಕರಣಗಳಲ್ಲಿ ನಿಯಮಾನುಸಾರ ಪರಿಹಾರವನ್ನು ಜಿಲ್ಲಾಧಿಕಾರಿಗಳ ಹಂತದಲ್ಲಿ ನೀಡುವ ಕುರಿತು – ಷರತ್ತುಗಳನ್ನು ನಿಗಧಿಪಡಿಸುವುದು.

**ಉಲ್ಲೇಖ:**
1. ಭಾರತೀಯ ಹವಾಮಾನ ಇಲಾಖೆಯ ಮುಂಗಾರು ಮುನ್ಸೂಚನೆ ದಿನಾಂಕ: 15.04.2024.
2. ಸರ್ಕಾರದ ಸೂತ್ತೋಲೆ ಸಂಖ್ಯೆ: ಕಂಇ 191 ಟಿಎನ್‌ಆರ್ 2024, ದಿನಾಂಕ: 04.05.2024.
3. ಕೇಂದ್ರ ಗೃಹ ಮಂತ್ರಾಲಯ (ವಿಪತ್ತು ನಿರ್ವಹಣೆ ವಿಭಾಗ) ದ ಪತ್ರ ಸಂಖ್ಯೆ: 33-03/2020-NDM-I, ದಿನಾಂಕ: 11.07.2023.

*****

**ಪ್ರಸ್ತಾವನೆ:**

ಭಾರತೀಯ ಹವಾಮಾನ ಇಲಾಖೆಯು ಉಲ್ಲೇಖಿತ (1) ರ ದಿನಾಂಕ: 15.04.2024 ರಂದು ನೀಡಿರುವ ಮುನ್ಸೂಚನೆಯಲ್ಲಿ ನೈಋತ್ಯ ಮುಂಗಾರು-2024 ರ ಮೊದಲ ಹಂತದ ಕಾರ್ಯಚರಣೆಯ ಧೀರ್ಘ ವ್ಯಾಪ್ತಿಯ ಮುನ್ಸೂಚನೆಯ (LRF) ಪ್ರಕಾರ ಒಟ್ಟಾರೆಯಾಗಿ ದೇಶದಾದ್ಯಂತ ಮಳೆಯು ಸಾಮಾನ್ಯಕ್ಕಿಂತ ಹೆಚ್ಚಾಗಿ ಇದ್ದು, ರಾಜ್ಯದಲ್ಲಿ ಮುಂಗಾರಿನ ಅವಧಿಯಲ್ಲಿ, ಇದುವರೆವಿಗೂ ವಾಡಿಕೆಯಾಗಿ 570 ಮಿ.ಮೀ., ಮಳೆಯಾಗಬೇಕಾಗಿದ್ದು ವಾಸ್ತವಿಕವಾಗಿ 704 ಮಿ.ಮೀ., ಮಳೆಯಾಗಿದ್ದು, ಶೇ.23ರಷ್ಟು ಹೆಚ್ಚು ಮಳೆಯಾಗಿರುತ್ತದೆ. ಮುಂಗಾರು ಅವಧಿಯಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆ ಉಂಟಾದಲ್ಲಿ ಸಂಭವಿಸಬಹುದಾದ ದುಷ್ಪರಿಣಾಮಗಳನ್ನು ಸಮರ್ಪಕವಾಗಿ/ಸಮರ್ಥಕವಾಗಿ ನಿಭಾಯಿಸಲು ಹಾಗೂ ಹಾನಿಯನ್ನು ತಗ್ಗಿಸಲು ಮುಂಗಾರು ಪೂರ್ವದಲ್ಲಿ ಪೂರ್ವ ಸಿದ್ಧತೆ / ಸನ್ನದ್ಧತೆ ಕ್ರಮಗಳನ್ನು ಕೈಗೊಳ್ಳಬೇಕಾಗಿದ್ದು, ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಹಂತದ ಅಧಿಕಾರಿಗಳೊಂದಿಗೆ ಪೂರ್ವ ಸಿದ್ಧತೆ ಸಭೆಗಳನ್ನು ನಡೆಸಿ, ಕೈಗೊಳ್ಳಬೇಕಾಗಿರುವ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿಗಧಿಪಡಿಸಿ ಹಾಗೂ ತೆಗೆದುಕೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ಉಲ್ಲೇಖ (2) ರ ಸೂತ್ತೋಲೆಯಲ್ಲಿ ನೀಡಲಾಗಿರುತ್ತದೆ.

2024-25ನೇ ಸಾಲಿನಲ್ಲಿ ನೈಸರ್ಗಿಕ ವಿಕೋಪಗಳಿಂದ ಸ್ಥಳೀಯವಾಗಿ ಉಂಟಾಗುವ ಬೆಳೆ ಹಾನಿಗೆ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ: 11.07.2023 ರಂದು ಹೊರಡಿಸಿರುವ Revised Items of Expenditure and Norms of assistance from the State Disaster Response Fund (SDRF) ರ ಮಾರ್ಗಸೂಚಿಗಳನ್ವಯ ನಿಯಮಾನುಸಾರ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ಪಾವತಿಸಬಹುದಾದ ಪರಿಹಾರ ಮೊತ್ತವನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳ ಹಂತದಲ್ಲಿಯೇ ಪರಿಹಾರ ತಂತ್ರಾಂಶದ ಮುಖಾಂತರ ಮಾತ್ರವೇ ನಿಯಮಾನುಸಾರ ಅರ್ಹ ರೈತ ಫಲಾನುಭವಿಗಳಿಗೆ ಅರ್ಹತೆಗನುಗುಣವಾಗಿ ಪಾವತಿಸಲು ತಿರ್ಮಾನಿಸಿ, ಅದರಂತೆ ಸ್ಥಳಿಯವಾಗಿ ಉಂಟಾಗುವ ಬೆಳೆ ಹಾನಿಗಳಿಗೆ ಪರಿಹಾರವನ್ನು ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಮಾನುಸಾರ ಪಾವತಿಸಲು ಕಾರ್ಯವಿಧಾನ ಹಾಗೂ ಷರತ್ತು / ನಿಬಂಧನೆಗಳನ್ನು ನಿಗಧಿ ಪಡಿಸಲು ಸರ್ಕಾರವು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ 214 ಟಿಎನ್‌ಆರ್ 2024;**
**ಬೆಂಗಳೂರು, ದಿನಾಂಕ: 16.08.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2024-25ನೇ ಸಾಲಿನಲ್ಲಿ ನೈಸರ್ಗಿಕ ವಿಕೋಪಗಳಾದ ಅತಿವೃಷ್ಟಿ / ಪ್ರವಾಹ / ಬರ ಪರಿಸ್ಥಿತಿ / ಆಲಿಕಲ್ಲು ಮಳೆಯಿಂದ ಸ್ಥಳೀಯವಾಗಿ ಉಂಟಾಗುವ ಬೆಳೆಹಾನಿ ಪ್ರಕರಣಗಳಲ್ಲಿ, ನಿಯಮಾನುಸಾರ ಅರ್ಹ ರೈತ ಫಲಾನುಭವಿಗಳಿಗೆ

.....2

ಅರ್ಹತೆಗನುಗುಣವಾಗಿ, ನೈಸರ್ಗಿಕ ವಿಕೋಪಗಳಿಂದ ಉಂಟಾಗುವ ಹಾನಿಗಳಿಗೆ ಪಾವತಿಸಬಹುದಾದ ಪರಿಹಾರ ಮೊತ್ತದ ಕುರಿತು ಕೇಂದ್ರ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ: 11.07.2023 ರಂದು ಹೊರಡಿಸಿರುವ Revised Items of Expenditure and Norms of assistance from the State Disaster Response Fund (SDRF) ರಲ್ಲಿ ನಿಗಧಿಪಡಿಸಿರುವಂತೆ, ಪರಿಹಾರ ಮೊತ್ತವನ್ನು ಜಿಲ್ಲಾಧಿಕಾರಿಗಳ ಹಂತದಲ್ಲಿ ರಾಜ್ಯ ವಿಪತ್ತು ಪರಿಹಾರ ನಿಧಿಯಡಿಯಲ್ಲಿ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ (ನೈಸರ್ಗಿಕ ವಿಕೋಪ ನಿರ್ವಹಣೆಗಾಗಿ) ಲಭ್ಯವಿರುವ ಅನುದಾನದಿಂದ, ಪರಿಹಾರ ತಂತ್ರಾಂಶದ ಮುಖಾಂತರ ಮಾತ್ರ, ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳ ಪಾಲನೆಗೊಳಪಟ್ಟು ಹಾಗೂ ಕಾರ್ಯವಿಧಾನದನ್ವಯ ಪಾವತಿಸಲು ಆದೇಶಿಸಿದೆ.

**ಕಾರ್ಯ ವಿಧಾನ :**

1. ಕೃಷಿ / ತೋಟಗಾರಿಕೆ / ರೇಷ್ಮೆ ಇಲಾಖೆಗಳ ಜಂಟಿ/ಉಪ ನಿರ್ದೇಶಕರು ನೈಸರ್ಗಿಕ ವಿಕೋಪಗಳಾದ ಅತಿವೃಷ್ಟಿ / ಪ್ರವಾಹ / ಬರ ಪರಿಸ್ಥಿತಿ / ಆಲಿಕಲ್ಲು ಮಳೆಯಿಂದ ಬೆಳೆಹಾನಿ ಸಂಭವಿಸಿದ ಕೂಡಲೇ ಈ ಕೆಳಕಂಡ ನಮೂನೆಯಲ್ಲಿ ಜಿಲ್ಲಾಧಿಕಾರಿಗಳಿಗೆ ವರದಿಯನ್ನು ಸಲ್ಲಿಸುವುದು.

**<u>ಬೆಳೆಹಾನಿ ವಿವರ</u>**

| ಕ್ರ.ಸಂ | ತಾಲ್ಲೂಕು ಮತ್ತು ಜಿಲ್ಲೆ ಹೆಸರು | ಗ್ರಾಮದ ಮತ್ತು ಗ್ರಾಮ ಪಂಚಾಯತ್ ಹೆಸರು | ವಿಸ್ತೀರ್ಣ ಹಾಗೂ ಸರ್ವೇ ಸಂಖ್ಯೆ | ಫಲಾನುಭವಿಗಳ ಹೆಸರು ಮತ್ತು FRUITS ID | ಬೆಳೆಗಳ ಹೆಸರು ಹಾಗೂ ವಿವರ (ಕೃಷಿ / ತೋಟಗಾರಿಕೆ) | ಮಳೆಯಾಶ್ರಿತ ಬೆಳೆ | ನೀರಾವರಿ ಬೆಳೆ | ಬಹುವಾರ್ಷಿಕ ಬೆಳೆ | ಹಾನಿ ವಿಸ್ತೀರ್ಣ | ನೈಸರ್ಗಿಕ ವಿಕೋಪ (ಕಾರಣ) | ಸಮೀಕ್ಷೆ ನಡೆಸಿದ ದಿನಾಂಕ |
|---|---|---|---|---|---|---|---|---|---|---|---|
| | | | | | | | | | | | |

2. ಮೇಲಿನ ವರದಿಯನ್ನು ಆಧಾರಿಸಿ ಜಿಲ್ಲಾಧಿಕಾರಿಗಳ ಅನುಮೋದನೆಯಂತೆ ಸಹಾಯಕ ನಿರ್ದೇಶಕರು, ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆ ಮತ್ತು ಗ್ರಾಮ ಆಡಳಿತಾಧಿಕಾರಿಗಳನ್ನು ಒಳಗೊಂಡ ರಚಿಸಿರುವ ತಂಡವು 03 ದಿನಗಳ ಒಳಗಾಗಿ ಬೆಳೆಹಾನಿ ಉಂಟಾದ ಸಂಪೂರ್ಣ ಪ್ರದೇಶದ ಜಂಟಿ ಸಮೀಕ್ಷೆ ನಡೆಸಿ ಬೆಳೆ ಹಾನಿ ವಿವರಗಳನ್ನು ಸಲ್ಲಿಸುವುದು. ಈ ರೀತಿ ಸಲ್ಲಿಸುವ ಜಂಟಿ ಸಮೀಕ್ಷೆ ವರದಿಯಲ್ಲಿನ ಬೆಳೆ ಹಾನಿ ಪ್ರದೇಶಗಳನ್ನು ರಾಂಡಮ್‌ಆಗಿ (random) ತಹಶೀಲ್ದಾರ್ ರವರು ಶೇ. 15%, ಸಹಾಯಕ ಆಯುಕ್ತರು ಶೇ. 05% ಮತ್ತು ಜಿಲ್ಲಾಧಿಕಾರಿಗಳು ಶೇ. 02% ರಷ್ಟು ಸಮೀಕ್ಷಿ ನಡೆಸುವುದು.
3. ಬೆಳೆಹಾನಿಯ ಜಂಟಿ ಸಮೀಕ್ಷೆಯ ವರದಿಯ ಆಧಾರಿಸಿ ಜಿಲ್ಲಾಧಿಕಾರಿಗಳು ಪ್ರಕೃತಿ ವಿಕೋಪ ಸಂಭವಿಸಿದ 10 ದಿನದೊಳಗಾಗಿ ಕರಡು ಮೆಮೋರಾಂಡಮ್‌ನ್ನು ಜಿಲ್ಲಾಧಿಕಾರಿ, ಸಂಬಂಧಿತ ಉಪ ವಿಭಾಗಾಧಿಕಾರಿ, ತಹಶೀಲ್ದಾರ್, ಗ್ರಾಮ ಪಂಚಾಯತಿ ಕಛೇರಿಗಳಲ್ಲಿ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಮೇಲಿನ ನಮೂನೆಯಂತೆ ಪ್ರಕಟಿಸಿ ಆಕ್ಷೇಪಣೆಗಳನ್ನು ಅಹ್ವಾನಿಸುವುದು. (ಉದಾ: ರೈತರಿಂದ ಬೆಳೆಹಾನಿ ವಿಸ್ತೀರ್ಣ, ಬೆಳೆಹಾನಿ ವಿವರ, ಬೆಳೆಹಾನಿ ನಷ್ಟ ಇತ್ಯಾದಿಗಳ ಬಗ್ಗೆ ಸ್ವೀಕೃತವಾಗಬಹುದಾದ ಆಕ್ಷೇಪಣೆಗಳು). ಆಕ್ಷೇಪಣೆಗಳ ಸ್ವೀಕೃತಿಗೆ 07 ದಿನಗಳ ಕಾಲಾವಕಾಶ ನೀಡುವುದು.
4. ಜಿಲ್ಲಾಧಿಕಾರಿಗಳು ರೈತರಿಂದ ಸ್ವೀಕೃತವಾಗುವ ಆಕ್ಷೇಪಣೆಗಳ ಕುರಿತು ಪರಿಶೀಲಿಸಿ, ನಿಯಮಾನುಸಾರ ಆಕ್ಷೇಪಣೆಗಳನ್ನು ನಿವಾರಿಸಿ 10 ದಿನಗಳ ಒಳಗಾಗಿ ಅಂತಿಮ ಮೆಮೋರಾಂಡಮ್‌ನ್ನು ಜಿಲ್ಲಾಧಿಕಾರಿ, ಸಂಬಂಧಿತ ಉಪ ವಿಭಾಗಾಧಿಕಾರಿ, ತಹಶೀಲ್ದಾರ್, ಗ್ರಾಮ ಪಂಚಾಯತಿ ಕಛೇರಿಗಳಲ್ಲಿ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಪ್ರಕಟಿಸಿ ಮತ್ತು

.....3

ಪರಿಹಾರ ತಂತ್ರಾಂಶದಲ್ಲಿ ವಿವರಗಳನ್ನು ಅಳವಡಿಸಿ, digital ಸಹಿಯೊಂದಿಗೆ ಅನುಮೋದನೆಗಾಗಿ **ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಇವರಿಗೆ ಪರಿಹಾರ ತಂತ್ರಾಂಶದಲ್ಲಿ ಸಲ್ಲಿಸುವುದು. ಇದನ್ನು 03 ದಿನಗಳೊಳಗಾಗಿ ನಿಯಮಾನುಸಾರ ಪರಿಶೀಲಿಸಿ, ನಿರ್ಣಯದೊಂದಿಗೆ ಜಿಲ್ಲಾಧಿಕಾರಿಗಳಿಗೆ ಪರಿಹಾರ ತಂತ್ರಾಂಶದಲ್ಲಿ digital ಸಹಿಯೊಂದಿಗೆ ಹಿಂದಿರುಗಿಸುವುದು.**

| ಕ್ರ.ಸಂ | ತಾಲ್ಲೂಕು ಮತ್ತು ಜಿಲ್ಲೆಯ ಹೆಸರು | ಗ್ರಾಮದ ಮತ್ತು ಗ್ರಾಮ ಪಂಚಾಯತ್ ಹೆಸರು | Masked Aadhaar | ಫಲಾನುಭವಿಗಳ ಹೆಸರು ಮತ್ತು FRUITS ID | ಸರ್ವೇ ಸಂಖ್ಯೆ | ಬೆಳೆಗಳ ಹೆಸರು ಹಾಗೂ ವಿವರ (ಕೃಷಿ / ತೋಟಗಾರಿಕೆ) | ಮಳೆಯಾಶ್ರಿತ ಬೆಳೆ | ನೀರಾವರಿ ಬೆಳೆ | ಬಹುವಾರ್ಷಿಕ ಬೆಳೆ | ಹಾನಿಯ ವಿಸ್ತೀರ್ಣ | ನೀಡಿದ ಪರಿಹಾರ ಮೊತ್ತ |
|---|---|---|---|---|---|---|---|---|---|---|---|
| | | | | | | | | | | | |

5. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರಿಂದ ಅನುಮೋದನೆಯಾದ 03 ದಿನಗಳೊಳಗಾಗಿ ಜಿಲ್ಲಾಧಿಕಾರಿರವರು ತಮ್ಮ ಪಿ.ಡಿ. ಖಾತೆಯಲ್ಲಿ (ನೈಸರ್ಗಿಕ ವಿಕೋಪ ನಿರ್ವಹಣೆಗಾಗಿ) ಲಭ್ಯವಿರುವ ರಾಜ್ಯ ವಿಪತ್ತು ಪರಿಹಾರನಿಧಿಯ ಅನುದಾನದಿಂದ ನಿಯಮಾನುಸಾರ ಅರ್ಹ ರೈತರ ಫಲಾನುಭವಿಗಳಿಗೆ ಬೆಳೆಹಾನಿ ಪರಿಹಾರವನ್ನು ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ DBT ಮುಖಾಂತರ ಒಂದು ವಾರದೊಳಗಾಗಿ ಪಾವತಿಸಲು ಕ್ರಮವಹಿಸುವುದು.

**ಸದರಿ ಆದೇಶವು ಈ ಕೆಳಕಂಡ ಷರತ್ತುಗಳ ಷರತ್ತುಗಳು ಪಾಲನೆಗೆ ಒಳಪಟ್ಟಿರುತ್ತದೆ:**

1. ಸ್ಥಳೀಯವಾಗಿ ನೈಸರ್ಗಿಕ ವಿಕೋಪಗಳಿಂದ ಉಂಟಾಗಿರುವ ಬೆಳೆಹಾನಿಯನ್ನು, ಜಂಟಿ ಸಮೀಕ್ಷೆ ಮುಖಾಂತರ ಗುರುತಿಸಿ, ಮೆಮೋರಾಂಡಮ್‌ನ್ನು ಸಿದ್ಧಪಡಿಸಿ ರೈತರು ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾಧಿಕಾರಿಗಳು, ಸಂಬಂಧಿತ ಉಪ ವಿಭಾಗಾಧಿಕಾರಿ, ತಹಶೀಲ್ದಾರ್, ಗ್ರಾಮ ಪಂಚಾಯತಿ ಕಛೇರಿಗಳಲ್ಲಿ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಪ್ರಕಟಿಸಿ ಆಕ್ಷೇಪಣೆಗಳನ್ನು ಒಂದು ವಾರದೊಳಗಾಗಿ ಪಡೆಯುವುದು ಮತ್ತು ಜಿಲ್ಲಾಧಿಕಾರಿಗಳ ಜಾಲತಾಣ (Website)ದಲ್ಲಿ ಪ್ರಕಟಿಸುವುದು.
2. ಬೆಳೆಹಾನಿ ಪರಿಹಾರ (Input subsidy) ನ್ನು ಭೂಮಿ ಸೆಲ್ ನಿರ್ವಹಿಸುತ್ತಿರುವ ಪರಿಹಾರ ತತ್ರಾಂಶದ ಮೂಲಕ ಮಾತ್ರ ಬೆಳೆಹಾನಿ ಪರಿಹಾರವನ್ನು ವಿತರಿಸತಕ್ಕದ್ದು.
3. ಜಂಟಿ ಸಮೀಕ್ಷೆ ಆಧಾರದ ಮೇಲೆ ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳಿಂದ ಕ್ರೂಢೀಕೃತ ಮತ್ತು ದೃಢೀಕೃತ ಮಾಹಿತಿಯನ್ನು FRUITS ತಂತ್ರಾಂಶದಲ್ಲಿ ನೊಂದಣಿಯಾಗಿರುವ Farmers ID ಹೊಂದಿರುವ ಆಧಾರ್ ಜೋಡಣೆಯಾಗಿರುವ ಅರ್ಹ ರೈತರ ಬ್ಯಾಂಕ್ ಖಾತೆಗೆ DBT ಮೂಲಕ ನಿಯಮಾನುಸಾರ ಪಾವತಿಸುವುದು. ಭೂಮಿ ಸೆಲ್ ರವರು payment logic ಪ್ರಕಾರ ತಾಲ್ಲೂಕಿನಲ್ಲಿ ಅತೀ ಕಡಿಮೆ ಭೂಮಿಯನ್ನು ಹೊಂದಿರುವ ಅರ್ಹ ರೈತನಿಂದ ಪ್ರಾರಂಭಿಸಿ ಅತೀ ಹೆಚ್ಚು ಭೂಮಿಯನ್ನು ಹೊಂದಿರುವ ಅರ್ಹ ರೈತನಿಗೆ ಆರೋಹಣ ಕ್ರಮದಲ್ಲಿ (ascending order) ಪಾವತಿ ಮಾಡುವುದು ಹಾಗೂ ಇದರಲ್ಲಿಯೂ ಸಹ ಮಳೆಯಾಶ್ರಿತ ಬೆಳೆ ನಂತರ ನೀರಾವರಿ ಬೆಳೆ, ತದನಂತರ ಬಹು ವಾರ್ಷಿಕ ಬೆಳೆಗೆ ಈ ಕ್ರಮದಲ್ಲಿ ಪರಿಹಾರ ಮೊತ್ತವನ್ನು ಪಾವತಿ ಮಾಡುವುದು.
4. ಪಲಾನುಭವಿಯು ಜಮೀನಿಗೆ ಸಂಬಂಧಿಸಿದಂತೆ ನಿಯಮಾನುಸಾರ ಅಗತ್ಯ ದಾಖಲೆಗಳು (RTC ಇತ್ಯಾದಿ) ಹೊಂದಿರಬೇಕು.
5. ಬೆಳೆಹಾನಿ ಪರಿಹಾರ ಪಡೆಯುವ ಫಲಾನುಭವಿಯ ಆಧಾರ್ ಸಂಖ್ಯೆಯು ಬ್ಯಾಂಕ್ ಖಾತೆಗೆ ಜೋಡಣೆಯಾಗಿರಬೇಕು ಹಾಗು ನಿಯಮಾನುಸಾರ ಆಧಾರ ಜೋಡಣೆ ಆಗಿರುವ ಬ್ಯಾಂಕ್ ಖಾತೆಗೆ ಮಾತ್ರ DBT ಮೂಲಕ ಬೆಳೆ ಹಾನಿ ಪರಿಹಾರ ಪಾವತಿ ಮಾಡತಕ್ಕದ್ದು.

.....4

6. ಈ ಹಿಂದೆ ನೀರಾವರಿ ಯೋಜನೆಗಳಿಗೆ ರೈತರ ಕೃಷಿ ಜಮೀನುಗಳನ್ನು ಭೂ ಸ್ವಾಧೀನ ಮಾಡಿಕೊಂಡಿರುವ ಪ್ರಕರಣಗಳಲ್ಲಿ ಪಹಣಿಗಳಲ್ಲಿ ನೀರಾವರಿ ಇಲಾಖೆಯ ಹೆಸರು ಸೇರ್ಪಡೆಯಾಗದೆ ಇರುವ ಪ್ರಕರಣಗಳಲ್ಲಿ, ಭೂಮಿ ಸೆಲ್‌ರವರು ಭೂಸ್ವಾಧೀನವಾದ ವಿಸ್ತೀರ್ಣಕ್ಕೆ ಭೂಮಿ ದತ್ತಾಂಶದಲ್ಲಿ ಬೆಳೆ ಸಮೀಕ್ಷೆಯಲ್ಲಿ ಸೇರಿದ್ದರೂ ಬೆಳೆಹಾನಿ ಪರಿಹಾರಕ್ಕೆ ಪರಿಗಣಿಸತಕ್ಕದಲ್ಲ.
7. ಕೃಷಿಯೇತರ ಉದ್ದೇಶಕ್ಕಾಗಿ ಕೃಷಿ ಜಮೀನು ಭೂ-ಪರಿವರ್ತನೆಯಾಗಿರುವ ಪ್ರಕರಣಗಳನ್ನು ಭೂಮಿ ಸೆಲ್‌ರವರು ಬೆಳೆಹಾನಿ ಪರಿಹಾರಕ್ಕೆ ಪರಿಗಣಿಸತಕ್ಕದಲ್ಲ.
8. ಸರ್ಕಾರಿ ಜಮೀನುಗಳನ್ನು ಭೂಮಿ ದತ್ತಾಂಶದಲ್ಲಿ ಗುರುತಿಸಿ ಬೆಳೆಹಾನಿ ಪರಿಹಾರ ನೀಡದಂತೆ ಭೂಮಿ ಸೆಲ್‌ರವರು ನೋಡಿಕೊಳ್ಳತಕ್ಕದ್ದು.
9. RTC ಕಾಲಂನಲ್ಲಿ ಅಧಿಕೃತವಾಗಿ ಭೂ ಪರಿವರ್ತನೆಯಾಗದೆ ಇದ್ದರೂ ಸಹ ವಾಸ್ತವಿಕವಾಗಿ **ಇತ್ತೀಚಿನ ಬೆಳೆ ಸಮೀಕ್ಷೆಯ ದತ್ತಾಂಶದಲ್ಲಿ** NA (ಭೂ ಪರಿವರ್ತನೆ)ಎಂದು ದಾಖಲಿಸಿರುವ ಕೃಷಿ ಜಮೀನುಗಳನ್ನು ಭೂಮಿ ಸೆಲ್‌ರವರು ಬೆಳೆ ಹಾನಿ ಪರಿಹಾರಕ್ಕೆ ಪರಿಗಣಿಸತಕ್ಕದ್ದಲ್ಲ.
10. ಜಂಟಿ ಖಾತೆದಾರರಾಗಿದ್ದಲ್ಲಿ ನಿಯಮಾನುಸಾರ FRUITS ತಂತ್ರಾಂಶದಲ್ಲಿ ನೊಂದಾಯಿಸಿದ ವಿಸ್ತೀರ್ಣಕ್ಕೆ ಅನುಗುಣವಾಗಿ ಬೆಳೆಹಾನಿ ಪರಿಹಾರ ಪಾವತಿಸುವುದು.
11. ಒಂದೇ ಹಿಸ್ಸಾ ಜಮೀನುಗಳಲ್ಲಿ ಬಹು ಮಾಲಿಕರಿದ್ದಲ್ಲಿ ಒಂದೇ ವಿಸ್ತೀರ್ಣದ ಕ್ಷೇತ್ರಕ್ಕೆ ಎರಡು ಸಲ ಬೆಳೆ ಹಾನಿ ಪರಿಹಾರ ಪಾವತಿಯಾಗದ ಹಾಗೆ ಭೂಮಿ ಸೆಲ್ ರವರು ನೋಡಿಕೊಳ್ಳತಕ್ಕದ್ದು.
12. ಒಂದೇ ಹಿಸ್ಸಾ ಜಮೀನಿಗೆ ಒಂದೇ ವಿಸ್ತೀರ್ಣಕ್ಕೆ ಎರಡು ಸಲ (ಡಬಲ್ ಪೇಮೆಂಟ್) ಬೆಳೆಹಾನಿ ಪರಿಹಾರ ಪಾವತಿಯಾಗದ ಹಾಗೆ ಭೂಮಿ ಸೆಲ್‌ರವರು ನೋಡಿಕೊಳ್ಳತಕ್ಕದ್ದು.
13. ಎರಡು ಅಥವಾ ಅದಕ್ಕಿಂತಾ ಹೆಚ್ಚಿನ ತಾಲ್ಲೂಕುಗಳಲ್ಲಿ ಕೃಷಿ ಜಮೀನುಗಳನ್ನು ಹೊಂದಿದ್ದಲ್ಲಿ ಅರ್ಹತೆಯಂತೆ ಬೆಳೆ ಪರಿಹಾರವನ್ನು ಒಬ್ಬ ರೈತನಿಗೆ ಗರಿಷ್ಟ ಕ್ಷೇತ್ರ 2 ಹೆಕ್ಟೇರ್‌ಗಿಂತ ಹೆಚ್ಚಿಗೆ ನೀಡದಂತೆ ಭೂಮಿ ಸೆಲ್ ರವರು ನೋಡಿಕೊಳ್ಳತಕ್ಕದ್ದು.
14. ಜಿಲ್ಲಾಧಿಕಾರಿ ಅನುಮೋದಿಸುವ ಮೆಮೊರಾಡಂನಲ್ಲಿ ಸಲ್ಲಿಸಲಾದ ತಾಲ್ಲೂಕುವಾರು, ಬೆಳೆವಾರು ಬೆಳೆಹಾನಿ ವಿವರಗಳಲ್ಲಿ, ಒಂದೇ ಹಿಸ್ಸಾ ಕ್ಷೇತ್ರದಲ್ಲಿ ಒಂದಕ್ಕಿಂತಾ ಹೆಚ್ಚು ಬೆಳೆಗಳನ್ನು ಬೆಳೆದಿದಲ್ಲಿ ಯಾವ ಬೆಳೆಯು ಗರಿಷ್ಟ ಪ್ರಮಾಣದಲ್ಲಿ ಬೆಳೆಯಲಾಗಿದ್ದೆಯೋ, ಆ ಬೆಳೆಯನ್ನು ಪರಿಹಾರ ಮೊತ್ತವನ್ನು ನೀಡಲು payment logic ನಲ್ಲಿ ಭೂಮಿ ಸೆಲ್‌ರವರು ಪರಿಗಣಿಸತಕ್ಕದ್ದು.
15. RTCಯಲ್ಲಿರುವ ವಿಸ್ತೀರ್ಣ ಮತ್ತು ಬೆಳೆ ಸಮೀಕ್ಷೆಯಲ್ಲಿರುವ ವಿಸ್ತೀರ್ಣದಲ್ಲಿ ವ್ಯತ್ಯಾಸವಿರುವ ಪ್ರಕರಣಗಳನ್ನು ಗ್ರಾಮ ಲೆಕ್ಕಾಧಿಕಾರಿ ರವರ ಲಾಗಿನ್‌ಗೆ ಭೂಮಿ ಸೆಲ್ ರವರು ಕಳುಹಿಸುವುದು. ಅಂತಹ ಪ್ರಕರಣಗಳನ್ನು ಸ್ಥಳೀಯವಾಗಿ ವಾಸ್ತವಾಂಶಗಳ ಪರಿಶೀಲನೆ ಮಾಡಿ ಮೂರು (3) ದಿನಗಳಲ್ಲಿ ಗ್ರಾಮ ಲೆಕ್ಕಾಧಿಕಾರಿ ರವರು ನಿಯಮಗಳಂತೆ bio-metric ದೃಢೀಕರಣದ ಮೂಲಕ ಷರಾ ನಮೂದಿಸುವುದು.
16. ಆಧಾರ್ ಮತ್ತು RTC ಗಳಲ್ಲಿನ ಹೆಸರುಗಳಲ್ಲಿ ಶೇ.70ರಷ್ಟು ಹೊಂದಾಣಿಕೆಯಾಗದ ಪ್ರಕರಣಗಳನ್ನು ಪರಿಶೀಲನೆಗಾಗಿ ತಹಶೀಲ್ದಾರರ ಲಾಗಿನ್‌ಗೆ ಭೂಮಿ ಸೆಲ್ ರವರು ಕಳುಹಿಸುವುದು. ಅಂತಹ ಪ್ರಕರಣಗಳನ್ನು ಸ್ಥಳೀಯವಾಗಿ ವಾಸ್ತವಾಂಶಗಳ ಪರಿಶೀಲನೆ ಮಾಡಿ ಐದು (5) ದಿನಗಳಲ್ಲಿ ತಹಶೀಲ್ದಾರ್‌ರವರು bio-metric ದೃಢೀಕರಣದ ಮೂಲಕ ನಿಯಮಗಳಂತೆ ಷರಾ ನಮೂದಿಸುವುದು.
17. ಬೆಳೆಹಾನಿ ಪರಿಹಾರ ಪ್ರಾರಂಭ ಮಾಡುವುದಕ್ಕಿಂತ ಪೂರ್ವದಲ್ಲಿ ಮೇಲಿನ ಎಲ್ಲಾ ಷರತ್ತುಗಳನ್ನು ಗಮನದಲ್ಲಿಟ್ಟುಕೊಂಡು ಬೆಳೆಹಾನಿ ಪರಿಹಾರ ಪಾವತಿಸಲು ತಮ್ಮ ಜಿಲ್ಲೆಯಲ್ಲಿನ ಪರಿಹಾರ ದತ್ತಾಂಶಕ್ಕೆ digital signature ಮೂಲಕ ಜಿಲ್ಲಾಧಿಕಾರಿಗಳು ಅನುಮೋದನೆ ನೀಡುವುದು.

.....5

18. ಜಿಲ್ಲೆಯಲ್ಲಿ ತಾಲ್ಲೂಕುವಾರು, ಗಾಮ ಪಂಚಾಯತಿವಾರು, ಗ್ರಾಮವಾರು, ಫಲಾನುಭವಿವಾರು ವಿತರಣೆಯಾಗಿರುವ ಬೆಳೆಹಾನಿ ಪರಿಹಾರದ ವಿವರಗಳನ್ನು ಜಿಲ್ಲಾಧಿಕಾರಿ ರವರು ಅವರ ಜಿಲ್ಲೆಯ ಅಧಿಕೃತ ಜಾಲತಾಣದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಹಾಗೂ ಪಾರದರ್ಶಕತೆಗಾಗಿ ಪ್ರಕಟಿಸತಕ್ಕದ್ದು.
19. ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು, ಫಲಾನುಭವಿವಾರು ವಿತರಣೆಯಾಗಿರುವ ಬೆಳೆಹಾನಿ ಪರಿಹಾರದ ವಿವರಗಳನ್ನು ಭೂಮಿ ಸೆಲ್ ರವರು ಪರಿಹಾರ ತಂತ್ರಾಂಶದ ಅಧಿಕೃತ ಜಾಲತಾಣದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಹಾಗೂ ಪಾರದರ್ಶಕತೆಗಾಗಿ ಅಳವಡಿಸತಕ್ಕದ್ದು.
20. ನಿಯಮಗಳನುಸಾರ ಅರ್ಹತೆ ಇಲ್ಲದವರಿಗೆ ಬೆಳೆಹಾನಿ ಪರಿಹಾರ ಪಾವತಿ ಆದಲ್ಲಿ ಸಂಭಂಧಪಟ್ಟ ಕಂದಾಯ ಇಲಾಖೆಯ ಅಧಿಕಾರಿಗಳನ್ನು ಹಾಗು ಕೃಷಿ / ತೋಟಗಾರಿಕೆ ಇಲಾಖೆಯ ಅಧಿಕಾರಿಗಳನ್ನು ನೇರ ಹೊಣೆಗಾರರನಾಗಿ ಮಾಡಲಾಗುವುದು ಹಾಗು ಕಾನೂನಿನ ರೀತಿ ಮುಂದಿನ ಕ್ರಮ ಜರುಗಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 634/ವೆಚ್ಚ-7/2024, ದಿನಾಂಕ: 05.07.2024 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಆರ್. ಶಿವಶಂಕರ್)**
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ,
(ವಿಪತ್ತು ನಿರ್ವಹಣೆ ಮತ್ತು ನೋಂ & ಮು)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (A&E) ಹಾಗೂ (E & RSA), ಕರ್ನಾಟಕ, ಪಿ.ಬಿ.ನಂ. 5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ, ಪಿ.ಬಿ.ನಂ. 5398, ಪಾರ್ಕ್ ಹೌಸ್ ರೋಡ್, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ), ವಿಧಾನಸೌಧ, ಬೆಂಗಳೂರು.
7. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬೆಂಗಳೂರು.
8. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
9. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
10. ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7 & 8), ವಿಧಾನ ಸೌಧ, ಬೆಂಗಳೂರು.
12. ಎಲ್ಲಾ ಜಿಲ್ಲೆಗಳ ಜಂಟಿ / ಉಪ / ಸಹಾಯಕ ನಿರ್ದೇಶಕರು, ಕೃಷಿ / ತೋಟಗಾರಿಕೆ / ರೇಷ್ಮೆ ಇಲಾಖೆ – ಜಿಲ್ಲಾಧಿಕಾರಿಗಳ ಮುಖಾಂತರ.

.....6

**ಪ್ರತಿ:**

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿರವರುಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
5. ಲೆಕ್ಕ ಪತ್ರ ಶಾಖೆ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.